# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೊಪ್ಪಳ ಜಿಲ್ಲೆ, ಕುಷ್ಠಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ಎಲ್ಲಾ ಜನವಸತಿಗಳಿಗೆ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ರೂ.762.30ಕೋಟಿ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 185 ಗ್ರಾನೀಸ(5)2014 ದಿನಾಂಕ:24.02.2016.
2. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರ ಕಡತ ಸಂ:RDP 185 RDWSD 2015-16

---

**ಪೀಠಿಕೆ:**

ಕೊಪ್ಪಳ ಜಿಲ್ಲೆ, ಕುಷ್ಠಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ಎಲ್ಲಾ ಜನವಸತಿಗಳಿಗೆ ಸುರಕ್ಷಿತ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ರೂ.670.50ಕೋಟಿ ಅಂದಾಜಿನ DBOT ಆಧಾರಿತ ಯೋಜನೆಗೆ ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿತ್ತು. ಸದರಿ ಯೋಜನೆಯನ್ನು DBOT ಆಧಾರದ ಮೇಲೆ ಟೆಂಡರ್ ಕರೆಯಲು, ಟೆಂಡರ್ ದಸ್ತಾವೇಜು ಮತ್ತು ಗುತ್ತಿಗೆ ನಿರ್ವಹಣೆ ನಿಬಂಧನೆಗಳನ್ನು ಸಿದ್ಧಪಡಿಸಲು ಸರ್ಕಾರದ ಮಟ್ಟದಲ್ಲಿ ಸಮಿತಿ ರಚಿಸಿದ್ದು, ಸಮಿತಿ ಶಿಫಾರಸ್ಸಿನಂತೆ ದಸ್ತಾವೇಜನ್ನು ಅನುಮೋದಿಸಿದೆ.

ಈ ಯೋಜನೆಯ ತಾಂತ್ರಿಕ ಮೌಲ್ಯಮಾಪನ ಮತ್ತು ವಿಸ್ತೃತ ಯೋಜನಾ ವರದಿ ಪರಿಶೀಲನೆಗೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರು ರಚಿಸಿದ್ದ ಉನ್ನತ ಮಟ್ಟದ ತಾಂತ್ರಿಕ ಸಮಿತಿಯು ನೀಡಿದ ತಾಂತ್ರಿಕ ಸಲಹೆಗಳನ್ನು ಅಳವಡಿಸಲಾಗಿದೆ. ತಾಂತ್ರಿಕ ಸಮಿತಿಯ ಸಲಹೆಯಂತೆ ಕೆಲವು ಬದಲಾವಣೆ ಅಗತ್ಯವಿದ್ದು, ಅದರನ್ವಯ ಮೂಲ ಅಂದಾಜಿನಲ್ಲಿ ಮಾರ್ಪಡಿಸಲಾಗಿದೆ. 70 LPCD ಯಿಂದ 85 LPCDಗೆ ನೀರು ಪೂರೈಕೆ, 85 LPCDಯಂತೆ ನೀರನ್ನು ಒದಗಿಸಲು ಲಭ್ಯವಿರುವ OHTಗಳ ಜೊತೆಗೆ ಲಭ್ಯವಿಲ್ಲದೆಡೆ ಹೊಸ OHT ನಿರ್ಮಾಣ, ಎಲ್ಲಾ ಗ್ರಾಮಗಳಲ್ಲಿ ELSR ನಿರ್ಮಿಸುವುದು ಇತ್ಯಾದಿ ಕಾರಣಗಳಿಂದ ಯೋಜನೆಯ ಅಂದಾಜು ವೆಚ್ಚ ಪರಿಷ್ಕೃತವಾಗಿದೆ. ಪರಿಷ್ಕೃತ ಅಂದಾಜು ಮೊತ್ತ ರೂ.762.30ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ CE,RDWSD ರವರು ಕೋರಿರುತ್ತಾರೆ.

ಕೇಂದ್ರ ಪುರಸ್ಕೃತ NRDWP C&Q ಯಡಿ ಕುಷ್ಠಗಿ & ಯಲಬುರ್ಗಾ ತಾಲ್ಲೂಕುಗಳ ಎಲ್ಲಾ ಜನವಸತಿಗಳಿಗೆ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಪೂರೈಸುವ ಯೋಜನೆಯ ಪರಿಷ್ಕೃತ ಅಂದಾಜು ರೂ.762.30ಕೋಟಿಗಳ (5 ವರ್ಷಗಳ O&M ವೆಚ್ಚ ಸೇರಿ) ಪ್ರಸ್ತಾವನೆಗೆ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 64 ಗ್ರಾನೀಸ(5)2017 ಬೆಂಗಳೂರು, ದಿನಾಂಕ:07.08.2017.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಕೊಪ್ಪಳ ಜಿಲ್ಲೆ, ಕುಷ್ಠಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ಎಲ್ಲಾ ಜನವಸತಿಗಳಿಗೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜು **ರೂ.76230.00ಲಕ್ಷ (ಎಪ್ಪತ್ತಾರು ಸಾವಿರದ ಇನ್ನೂರ ಮೂವತ್ತು ಲಕ್ಷ ರೂಪಾಯಿಗಳು ಮಾತ್ರ)** ಗಳ ಅಂದಾಜಿನಲ್ಲಿ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಬಾಬ್ತು ಸೇರಿದಂತೆ ಕೇಂದ್ರ ಪುರಸ್ಕೃತ **NRDWP C&Q** ಮತ್ತು ರಾಜ್ಯ ವಲಯಗಳಡಿ DBOT ಮಾದರಿಯಲ್ಲಿ ಟೆಂಡರ್ ಕರೆಯುವ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2.ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

a) ಈ ಯೋಜನೆಯ **DBOT** ಟೆಂಡರ್‌ನ್ನು KTPP ಪಾರರ್ದಶಕ ನಿಯಮಗಳನ್ನು ಅನುಸರಿಸಿ ಅದರಂತೆ ಕ್ರಮವಹಿಸಲು ಸೂಚಿಸಲಾಗಿದೆ.

b) ಟೆಂಡರ್ ಅವಾರ್ಡ್ ಮಾಡುವ ಮೊದಲು ಅಗತ್ಯವಿರುವ ಅನುದಾನವನ್ನು ಲಭ್ಯತೆ ಮಾಡಿಕೊಂಡು ಕ್ರಿಯಾ ಯೋಜನೆಯಲ್ಲಿ ಅಳವಡಿಸಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸುವುದು.

c) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನ ಅಧಿಕಾರಿಗಳು ನಿಗಾವಹಿಸಿ ಪ್ರಚಲಿತ ನಿಯಮಗಳಾನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ – ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

d) ಯಶಸ್ವಿ ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ಹಾಗೂ ತದನಂತರ **5** ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು (ವಿದ್ಯುತ್ ಶುಲ್ಕ ಹೊರತುಪಡಿಸಿ) ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

e) ಯೋಜನಾ ವ್ಯಾಪ್ತಿಯ ಜನವಸತಿಗಳಿಗೆ 85 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಗುತ್ತಿಗೆದಾರರೇ ಅಂತಹ ಹೆಚ್ಚಳ ಭರಿಸತಕ್ಕದ್ದು.

f) ಗುತ್ತಿಗೆದಾರರು ಸಿದ್ಧಪಡಿಸುವ ಡಿ.ಪಿ.ಆರ್‌ಗೆ **CE-RDWSD** ಹಂತದಲ್ಲಿರುವ **DBOT** ತಾಂತ್ರಿಕ ಸಮಿತಿ, ತಾಂತ್ರಿಕ ಸಿಂಧುತ್ವವನ್ನು ಪರಿಶೀಲಿಸಿ ದೃಢೀಕರಿಸಬೇಕು. ಹೀಗೆ ದೃಢೀಕರಿಸುವಾಗ ವಾಸ್ತವಿಕವಾಗಿ ಅಗತ್ಯವಿರುವ ಪ್ರಮಾಣದ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗೆ ಅಗತ್ಯವಿರುವ ಎಲ್ಲಾ ತಾಂತ್ರಿಕ ವಿನ್ಯಾಸಗಳು ಮತ್ತು ಕಾಮಗಾರಿಗಳು ಪೂರಕವಾಗಿರುವುದನ್ನು ದೃಢಪಡಿಸಿಕೊಳ್ಳಬೇಕು.

g) ಈ ಯೋಜನಾ ಕಾಮಗಾರಿಯನ್ನು 36 ತಿಂಗಳ ಕಾಲಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು. ಯಾವುದೇ ವಿಳಂಬಕ್ಕೆ ಅವಕಾಶವೀಯಕೂಡದು ಯೋಜನೆಯ ಘಟಕದಲ್ಲಿನ ಸಾಮಗ್ರಿಗಳ ಬೆಲೆ ಹೆಚ್ಚಳಕ್ಕೆ ಅವಕಾಶವಿರುವುದಿಲ್ಲ. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

h) ಯೋಜನಾ ಅಂದಾಜು ಮೊತ್ತದ ಕನಿಷ್ಠ **10%**ನ್ನು ಯೋಜನೆ ಕಾರ್ಯಗತಗೊಳಿಸಿ ತೃಪ್ತಿಕರ **O&M** ವ್ಯವಸ್ಥೆ ನಿರೂಪಿಸುವ ಕಾರ್ಯಕ್ಷಮತೆ ಆಧರಿಸಿ ನಂತರ ಗುತ್ತಿಗೆದಾರರಿಗೆ ಪಾವತಿಸಬೇಕು.

i) ಈ ಯೋಜನೆಯ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು **PMC** ವರದಿ ಆಧರಿಸಿ ಅನುಮೋದಿತ **ToR** ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ **CE-RDWSD** ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ವರದಿ ಮಾಡತಕ್ಕದ್ದು.

j) ಈ ಯೋಜನೆಯ ವಿನ್ಯಾಸದ ಕಾರ್ಯಸಿಂಧುತ್ವ ಪರಿಶೀಲಿಸುವುದು, ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಜರೂರಾಗಿ ಕ್ರಮವಹಿಸತಕ್ಕದ್ದು.

k) ಮೇಲ್ಕಂಡ ಅನುಮೋದಿತ ಮೊತ್ತ **DBOT** ತಾಂತ್ರಿಕ ಸಮಿತಿ ದೃಢೀಕರಿಸುವ ಯೋಜನೆಯ ಮುಖ್ಯ ಕಾಮಗಾರಿಗಳ ವಾಸ್ತವಿಕ ಅಂದಾಜು ಮೊತ್ತದ ನಿಬಂಧನೆಗೊಳಪಟ್ಟಿರುತ್ತದೆ. ಅಂತೆಯೇ, ಅನುಮೋದಿತ ಸಂಸ್ಥೆಯೊಡನೆ **MoU**/ಕರಾರು ಪತ್ರ ಮಾಡಿಕೊಳ್ಳುವ ಮೊದಲು ಗರಿಷ್ಠ ಮಿತವ್ಯಯ ಅಳವಡಿಸಿ, ಸರ್ಕಾರದ ಅನುಮತಿ ಪಡೆದು ಯೋಜನೆಯ ಅನುಷ್ಠಾನ ಕುರಿತು **CE/RDWSD** ಮುಂದಿನ ಕ್ರಮವಹಿಸತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 237 ವೆಚ್ಚ-6/2017 ದಿ:30.06.2017ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಆಯುಕ್ತರು ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ವಿಶೇಷಾಧಿಕಾರಿಗಳು (ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂ.
7. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
8. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, ಕೆಹೆಚ್‌ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು.-09.
9. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಕೊಪ್ಪಳ**.
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, **ಕೊಪ್ಪಳ**.
11. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ ಕಛೇರಿ, **ಕಲಬುರಗಿ**
12. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಕೊಪ್ಪಳ**.
13. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1
14. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ ಕಾವೇರಿ ಭವನ, ಬೆಂ.
15. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
16. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಇವರ ಆಪ್ತ ಕಾರ್ಯದರ್ಶಿ
17. ಆಯುಕ್ತರು, ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ / ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಇವರುಗಳ ಆಪ್ತ ಸಹಾಯಕರು
18. ಉಪ ನಿರ್ದೇಶಕರು, Network Management Center (TNMC), ನಂ.49, ಖನಿಜ ಭವನ, ರೇಸ್ ಕೋರ್ಸ ರಸ್ತೆ, ಬೆಂಗಳೂರು.
19. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಪೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು
20. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು
21. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
22. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ).
23. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ-10ಪ್ರತಿಗಳು.
24. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.